**ದೋ.ಸಾ. :55 ಫ್ರಾ.ಸಾ. : 23**

ಸಾಕ್ಷಿಯ ಹೆಸರು : ಹರ್ಷ ಶೆಟ್ಟಿಗಾರ

**ದಿನಾಂಕಃ 21-01-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರಿದ ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ:-**

3. ಕಾರವಾರ ಶಿಪ್ಪಿಂಗ್ ಕಂಪನಿಗೆ ಸಂಬಂಧಿಸಿದಂತೆ ಪೊಲೀಸರಿಗೆ ನೀಡಿದ ದಾಖಲೆಗಳನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಸದರಿ ದಾಖಲೆಯು ಒಟ್ಟು 12 ಪುಟಗಳಲ್ಲಿದ್ದು, ಅವುಗಳನ್ನು ಒಟ್ಟಾರೆಯಾಗಿ ನಿಪಿ-137 ಎಂದು ಗುರುತಿಸಲಾಯಿತು. ಅದೇ ರೀತಿ, ಕಾರವಾರ ಶಿಪ್ಪಿಂಗ್ ಕಂಪನಿಯ ಮಾಲೀಕತ್ವದ ಬಗ್ಗೆ ತಾವು ಪಡೆದುಕೊಂಡ ದಾಖಲೆಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-138 ಎಂದು ಗುರುತಿಸಲಾಯಿತು. ರಾಕ್ ಗಾರ್ಡನ್‌ನ ಯೋಜನೆಗಳ ಕಾಮಗಾರಿಯನ್ನು ಪ್ರಾರಂಭಿಸಲು ಸರ್ಕಾರವು ಮಾಡಿದ ಆದೇಶದ ಪ್ರತಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-139 ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ದಾಖಲೆಗಳೊಂದಿಗೆ ನೀಡಿದ ಕವಚ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-140 ಎಂದು, ಸಾಕ್ಷಿಯ ಸಹಿಯನ್ನು ನಿಪಿ-140(ಎ) ಎಂದು ಹಾಗೂ ಪೋಲೀಸರಿಂದ ಬಂದ ಕೋರಿಕೆ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-141 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದಃ-**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿ ಪರ ಶ್ರೀ ಎಲ್.ಎಸ್.ಕೆ. ವಕೀಲರಿಂದಃ-**

ಈ ದಿನ ನ್ಯಾಯಾಲಯದಲ್ಲಿ 2 ಮತ್ತು 3 ನೇ ಆರೋಪಿತರ ಪರ ವಕೀಲರು ಹಾಜರಿಲ್ಲದ ಕಾರಣ, 2 ಮತ್ತು 3 ನೇ ಆರೋಪಿತರು ಸ್ವತಃ ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎನ್.ವಿ.ಎನ್. ವಕೀಲರಿಂದಃ-**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 5 ನೇ ಆರೋಪಿ ಶ್ರೀ ಹೆಚ್ ಎಸ್ ಎಸ್ ವಕೀಲರಿಂದಃ–**

ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

ಸಹಿ ಇದೆ.

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ.